# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | **708** |
| 2 | ಸದಸ್ಯರ ಹೆಸರು | ಶ್ರೀ ಪ್ರತಾಪ ಸಿಂಹ ನಾಯಕ್ ಕೆ.<br>(ವಿಧಾನಸಭೆಯಿಂದ ಚುನಾಯಿತರಾದವರು) |
| 3 | ಉತ್ತರಿಸಬೇಕಾದ ದಿನಾಂಕ | 22.02.2023 |
| 4 | ಉತ್ತರಿಸುವ ಸಚಿವರು | ಕಂದಾಯ ಸಚಿವರು |

<table>
<tr><th>ಕ್ರ ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಭೂಮಾಪಕರ ಕೊರತೆಯಿಂದಾಗಿ ಸಾರ್ವಜನಿಕರಿಗೆ ಭೂಮಾಪನ ಸಂಬಂಧಿತ ಸೇವೆಗಳನ್ನು ಒದಗಿಸುವಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td>ಬಂದಿದೆ.</td></tr>
<tr><td>ಆ)</td><td>ಬಂದಿದ್ದಲ್ಲಿ, ಸದರಿ ಜಿಲ್ಲೆಗಳ ಭೂಮಾಪನ ಇಲಾಖೆಗೆ ಮಂಜೂರಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು; ಅವುಗಳಲ್ಲಿ ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ಭೂಮಾಪಕರ ಹುದ್ದೆಗಳೆಷ್ಟು; (ವಿವರ ನೀಡುವುದು)</td><td>ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಮಂಜೂರಾಗಿರುವ, ಭರ್ತಿಯಾಗಿರುವ ಮತ್ತು ಖಾಲಿ ಇರುವ ಭೂಮಾಪಕರ ಹುದ್ದೆಗಳ ವಿವರ ಈ ಕೆಳಕಂಡಂತಿದೆ.
<table>
<tr><th>ಕ್ರ. ಸಂ</th><th>ಜಿಲ್ಲೆಯ ಹೆಸರು</th><th>ಮಂಜೂರಿ</th><th>ಭರ್ತಿ</th><th>ಖಾಲಿ</th></tr>
<tr><td>1</td><td>ದಕ್ಷಿಣ ಕನ್ನಡ ಜಿಲ್ಲೆ</td><td>107</td><td>72</td><td>35</td></tr>
<tr><td>2</td><td>ಉಡುಪಿ</td><td>90</td><td>61</td><td>29</td></tr>
</table></td></tr>
<tr><td>ಇ)</td><td>ಈ ಸಮಸ್ಯೆಯನ್ನು ಪರಿಹರಿ ಸುವ ಸಲುವಾಗಿ ಭೂಮಾಪನ ಇಲಾಖೆಯಲ್ಲಿ ನೋಂದಣಿಯಾಗಿರುವ ಖಾಸಗಿ ಭೂಮಾಪಕರನ್ನು ಹೆಚ್ಚಿನ ಸಂಖ್ಯೆಯಲ್ಲಿ ಭೂಮಾಪನ ಕಾರ್ಯದಲ್ಲಿ ತೊಡಗಿಸಲು ಸರ್ಕಾರ ಈ ಕೂಡಲೇ ಕ್ರಮ ವಹಿಸುವುದೇ?</td><td>ಸರ್ಕಾರದ ಆದೇಶ ಸಂಖ್ಯೆ: ಕಂಇ 130 ಎಸ್ ಎಸ್ ಸಿ 2021 ದಿನಾಂಕ: 11.02.2022 ರಲ್ಲಿ ಹದ್ದುಬಸ್ತು / 11ಇ / ಪೋಡಿ / ಖಾಸಗಿ ಆಸ್ತಿಗಳ ಇ-ಸ್ವತ್ತು / ಭೂಪರಿವರ್ತನೆ ಪೂರ್ವ ನಕ್ಷೆ / ಸರ್ಕಾರಿ ಜಮೀನುಗಳ ಅಳತೆ ಮತ್ತು ಇತರೆ ಅರ್ಜಿಗಳ ಅಳತೆಯನ್ನು ಪರವಾನಗಿ ಭೂಮಾಪಕರಿಗೆ ಹಂಚಿಕೆ ಮಾಡಲು ಅವಕಾಶ ಕಲ್ಪಿಸಲಾಗಿರುತ್ತದೆ. ಪ್ರಸ್ತುತ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ 117 ಹಾಗೂ ಉಡುಪಿ ಜಿಲ್ಲೆಯಲ್ಲಿ 89 ಪರವಾನಗಿ ಭೂಮಾಪಕರುಗಳು ಕಾರ್ಯ ನಿರ್ವಹಿಸುತ್ತಿರುತ್ತಾರೆ.<br>ಭೂಮಾಪನ ಇಲಾಖೆಯಲ್ಲಿ ಒಟ್ಟು 3415 ಪರವಾನಗಿ ಭೂಮಾಪಕರು ಈಗಾಗಲೇ ಕರ್ತವ್ಯ ನಿರ್ವಹಿಸುತ್ತಿದ್ದು, ಇವರುಗಳ ಜೊತೆಗೆ 2021 ನೇ ಸಾಲಿನಲ್ಲಿ 1509 ಪರವಾನಗಿ ಭೂಮಾಪಕರುಗಳನ್ನು, 2022 ನೇ ಸಾಲಿನಲ್ಲಿ, 870 ಪರವಾನಗಿ ಭೂಮಾಪಕರುಗಳನ್ನು ಆಯ್ಕೆ ಮಾಡಿಕೊಳ್ಳಲಾಗಿರುತ್ತದೆ. 3 ನೇ ತಂಡದಲ್ಲಿ ಆಯ್ಕೆಯಾದ 1061 ಅಭ್ಯರ್ಥಿಗಳಿಗೆ ತರಬೇತಿಯನ್ನು ನೀಡಲಾಗುತ್ತಿದೆ. ಅಲ್ಲದೆ 2023 ನೇ ಸಾಲಿನಲ್ಲಿ 2000 ಪರವಾನಗಿ ಭೂಮಾಪಕರ ಆಯ್ಕೆ ಮಾಡಲು ಅಧಿಸೂಚನೆ ಹೊರಡಿಸಲಾಗಿದೆ.</td></tr>
</table>

**ಸಂಖ್ಯೆ: ಕಂಇ 55 ಎಸ್ಎಸ್ಸಿ 2023**

**(ಆರ್.ಅಶೋಕ)**
ಕಂದಾಯ ಸಚಿವರು